# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ

C.C No. 168/2013
CW-15 PW-08

ಹೆಸರು : ಬಸವರಾಜ ಯುವಣಿ

ತಂದೆ ಹೆಸರು : ಅಣವೀರಪ್ಪಾ

ವಯಸ್ಸು : 60 ವರ್ಷ

ಉದ್ಯೋಗ : ಒಕ್ಕಲುತನ

ವಾಸ ಸ್ಥಳ : ಬೊಮ್ಮನಹಳ್ಳಿ ಗ್ರಾಮ

---

**ಪ್ರಮಾಣವಚನ ಭೋಧಿಲಾಯಿತು. ದಿಃ 05-09-2023**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ**

ನನಗೆ ಚಾಸಾಃ 16 ರವರ ಪರಿಚಯ ಇರುತ್ತದೆ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸುಮಾರು 15 ವರ್ಷಗಳ ಹಿಂದೆ ಚಾಸಾಃ 16 ರವರು ನಮ್ಮ ಊರಿನಲ್ಲಿ ಹಳ್ಳಕ್ಕೆ ತಡೆಗೋಡೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸದರಿ ನಿರ್ಮಾಣ ಸರಿಯಾಗಿ ಆಗಿಲ್ಲ ಎಂಬ ವಿಷಯಕ್ಕೆ ಸಂಬಂಧಿಸಿದಂತೆ ನನ್ನನ್ನು ಕರೆಯಿಸಿದ್ದರು. ನಂತರ ಒಂದು ದಾಖಲೆಗೆ ನನ್ನ ಸಹಿಯನ್ನು ಪಡೆದಿದ್ದರು. ಸಾಕ್ಷಿಯು ನಿಪಿ-5 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-5 (ಬಿ) ಎಂದು ಗುರುತಿಸಲಾಯಿತು. ನಿಪಿ-5 ರಲ್ಲಿ ಬರೆದಿರುವ ವಿಷಯಗಳು ನನಗೆ ಸುಮಾರು 15 ವರ್ಷಗಳು ಆಗಿದ್ದರಿಂದ ನೆನಪಿರುವುದಿಲ್ಲ ಎಂದು ಸಾಕ್ಷಿ ನುಡಿಯುತ್ತಾರೆ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ**

ದಿಃ 02-03-2016 ರಂದು ಮಧ್ಯಾಹ್ನ 02.50 ರಿಂದ 03.50 ರ ಸಮಯದವರೆಗೆ ನನ್ನ ಮತ್ತು

ಚಾಸಾಃ 16 ರವರ ಸಮಕ್ಷಮ ನಿಪಿ-5 ರಂತೆ ಪಂಚನಾಮೆ ಕ್ರಮ ಜರುಗಿಸಿ, ನಿಪಿ-5 ರಲ್ಲಿ ಬರೆದಿರುವ ವಿಷಯಗಳನ್ನು ನನಗೆ ತಿಳಿಸಿ, ನಿಪಿ-5 ಕ್ಕೆ ನನ್ನ ಸಹಿಯನ್ನು ಪೊಲೀಸರು ಪಡೆದಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ. ಸಿ.ಬಿ.ಎ. ಪರ ಎಸ್.ಬಿ.ಕೆ. ವಕೀಲರಿಂದ**

ನಾನು ಸುಮಾರು 15 ರಿಂದ 16 ವರ್ಷಗಳ ಹಿಂದೆ ನಾನು ನಿಪಿ-5 ಕ್ಕೆ ಸಹಿ ಮಾಡಿರುತ್ತೇನೆ. ನಾನು ಘಟನಾ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ. ನನಗೆ ಚಾಸಾಃ 16 ರವರು ಘಟನಾ ಸ್ಥಳಕ್ಕೆ ಕರೆಸಿರುತ್ತಾರೆ. ನಿಪಿ-5 ರಲ್ಲಿ ಬರೆದಿರುವ ವಿಷಯಗಳು ನನಗೆ ನೆನಪಿರುವುದಿಲ್ಲ.

ನನ್ನ ಸಮಕ್ಷಮ ನಿಪಿ-5 ರಂತೆ ಪೊಲೀಸರು ಯಾವುದೇ ಪಂಚನಾಮೆ ಕ್ರಮ ಜರುಗಿಸಿರುವುದಿಲ್ಲ ಮತ್ತು ನನಗೆ ಯಾವುದೇ ಘಟನಾ ಸ್ಥಳವನ್ನು ತೋರಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-5 ರಂತೆ ಪಂಚನಾಮೆ ಕ್ರಮ ಜರುಗಿಸುವಾಗ ಸುಮಾರು 7-8 ಜನ ಹಾಜರಿದ್ದರು, ಅವರುಗಳ ಹೆಸರು ನನಗೆ ಗೊತ್ತಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಕೂಡಾ ನಿಪಿ-5 ಕ್ಕೆ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು, ಚಿತ್ತಾಪೂರ.